ಕರ್ನಾಟಕ ಸರ್ಕಾರ

ಸಂಖ್ಯೆ:ನಅಪ 42 ಎಸ್ಎಫ್ಸಿ 2016.

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸ ಸೌಧ
ಬೆಂಗಳೂರು, ದಿನಾಂಕ:01-04-2016.

ಅಧಿಸೂಚನೆ

ಬೃಹತ್ ಬೆಂಗಳೂರು ಮಹಾನಗರಪಾಲಿಕೆಯ ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುವ ಘನತ್ಯಾಜ್ಯವನ್ನು ವಿಲೇವಾರಿ ಮಾಡುವ ವಿಷಯವು ಅತ್ಯಂತ ಗಂಭೀರವಾಗಿದ್ದು, ಘನತ್ಯಾಜ್ಯ ಘಟಕಗಳ ಸುತ್ತಮುತ್ತ ಸಾರ್ವಜನಿಕರ ತೀವ್ರ ಪ್ರತಿರೋಧ ಕಂಡುಬರುತ್ತಿರುವ ಹಿನ್ನೆಲೆಯಲ್ಲಿ ಪಾಲಿಕೆಯ ವ್ಯಾಪ್ತಿಯ ಈ ಕೆಳಕಂಡ ಪ್ರದೇಶಗಳನ್ನು ಈ ಅಧಿಸೂಚನೆಯನ್ನು ಹೊರಡಿಸಿದ ದಿನಾಂಕದಿಂದ ಮೂರು ತಿಂಗಳ ಅವಧಿಯನ್ನು 'ತುರ್ತು ಪರಿಸ್ಥಿತಿ ಅವಧಿ' ಎಂದು ಘೋಷಿಸಿ, ಸದರಿ ಪ್ರದೇಶಗಳಲ್ಲಿ ವೈಜ್ಞಾನಿಕ ಘನತ್ಯಾಜ್ಯ ವಿಲೇವಾರಿ ಘಟಕಗಳನ್ನು ಸ್ಥಾಪಿಸುವ ಕಾಮಗಾರಿಯನ್ನು ಮೆ॥ ಕರ್ನಾಟಕ ಅರ್ಬನ್ ಇನ್ಫ್ರಾಸ್ಟ್ರಕ್ಚರ್ ಡೆವೆಲಪ್‌ಮೆಂಟ್ ಲಿಮಿಟೆಡ್‌ಗೆ (ಕೆಆರ್‌ಐಡಿಎಲ್)ರವರಿಗೆ ವಹಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ-1999ರ ಕಲಂ 4(ಎ)ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ, ಪಾರದರ್ಶಕತೆ ಕಾಯ್ದೆಯಿಂದ ವಿನಾಯ್ತಿ ನೀಡಿದೆ.

ಕ್ರ ಸಂ	ಸರ್ವೆ ನಂ. ಮತ್ತು ಹೆಸರು	ನಿರ್ವಹಿಸುತ್ತಿರುವ ಜಿಬಿಎಂಪಿ ವಲಯದ ಹೆಸರು
1	28-ಮುದ್ದಯ್ಯನಪಾಳ್ಯ	ದಕ್ಷಿಣ
2	59-ಮಾರ್ಗೋಂಡನಹಳ್ಳಿ	ರಾಜರಾಜೇಶ್ವರಿ ನಗರ
3	27.107-ಮೈಲಸಂದ್ರ	ಬೊಮ್ಮನಹಳ್ಳಿ
4	100-ಬೆಟ್ಟಹಲಸೂರು	ದಾಸರಹಳ್ಳಿ
5	271.176-ಬಾಗಲೂರು	ಪೂರ್ವ
6	02-ಮಿಟಗಾನಹಳ್ಳಿ	ಪಶ್ಚಿಮ

ಈ ಕಾಮಗಾರಿಗಳಿಗೆ ನೋಡಲ್ ಸಂಸ್ಥೆಯಾದ ಕರ್ನಾಟಕ ನಗರ ಮೂಲಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ಸಂಸ್ಥೆಗೆಯು ಉತ್ತಮ ಗುಣಮಟ್ಟದ ಕಾಮಗಾರಿಗಳನ್ನು ಸಮಂಜಸ ದರದಲ್ಲಿ ಸಂಗ್ರಹಿಸುವುದನ್ನು ಧೃಢಪಡಿಸಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ.ಎಸ್ ಭಾಗ್ಯಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ

ಇವರಿಗೆ:

ಜಂಟಿ ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರ, ಸರ್ಕಾರಿ ಮುದ್ರಣಾಲಯ, ಆರ್.ವಿ ಕಾಲೇಜು ಅಂಚೆ, ಮೈಸೂರು ರಸ್ತೆ, ಕೆಂಗೇರಿ, ಬೆಂಗಳೂರು-59, ಮುಂದಿನ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ ಹಾಗೂ 25 ಮುದ್ರಿತ ಪ್ರತಿಗಳನ್ನು ಸರಬರಾಜು ಮಾಡಲು ಕೋರಿದೆ.

---2.

ned by CamScanner

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಬೆಂಗಳೂರು ನಗರದ ಸುತ್ತಮುತ್ತಲಿನ ಪ್ರದೇಶಗಳಲ್ಲಿನ ಕ್ವಾರಿ ಹಾಗೂ ಇನ್ನಿತರ ಸೂಕ್ತ ಜಮೀನುಗಳಲ್ಲಿ ಘನತ್ಯಾಜ್ಯ ವಸ್ತುಗಳ ವಿಲೇವಾರಿಗಾಗಿ ವೈಜ್ಞಾನಿಕ ಭೂಭರ್ತಿ ಘಟಕ ನಿರ್ಮಿಸುವ ಕುರಿತು.

ಓದಲಾಗಿದೆ:- 1) ಸರ್ಕಾರದ ಆದೇಶ ಸಂಖ್ಯೆ:ನಅಇ 279 ಎಸ್‌ಎಫ್‌ಸಿ 2015, ದಿನಾಂಕ: 11-03-2016(2).

2) ಆಯುಕ್ತರು, ಬಿಬಿಎಂಪಿ ರವರ ಪತ್ರ ಸಂಖ್ಯೆ:ಆ/ಪಿಎಸ್‌ಆರ್/ ಪಿ-13379/2015-16, ದಿನಾಂಕ:24-03-2016.

3) ಆಯುಕ್ತರು, ಬಿಬಿಎಂಪಿ ರವರ ಪತ್ರ ಸಂಖ್ಯೆ:ಆ/ಪಿಎಸ್‌ಆರ್/ ಪಿ-289/2015-16, ದಿನಾಂಕ:28-03-2016.

COMMISSIONER
Bangalore Mahanagara Palike

ಪ್ರಸ್ತಾವನೆ:-

ಬೃಹತ್ ಬೆಂಗಳೂರು ಮಹಾನಗರಪಾಲಿಕೆಯ ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುವ ಘನತ್ಯಾಜ್ಯವನ್ನು ವಿಲೇವಾರಿ ಮಾಡುವ ವಿಷಯವು ಅತ್ಯಂತ ಗಂಭೀರವಾಗಿದ್ದು, ಘನತ್ಯಾಜ್ಯ ಘಟಕಗಳ ಸುತ್ತಮುತ್ತ ಸಾರ್ವಜನಿಕರ ತೀವ್ರ ಪ್ರತಿರೋಧ ಕಂಡುಬರುತ್ತಿರುವ ಹಿನ್ನೆಲೆಯಲ್ಲಿ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರಪಾಲಿಕೆ (ಬಿಬಿಎಂಪಿ) ರವರು ಪಾಲಿಕೆ ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುವ ಘನತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಲು ಈ ಕೆಳಕಂಡ ಕ್ವಾರಿ ಸ್ಥಳಗಳಲ್ಲಿ ಘನತ್ಯಾಜ್ಯ ಭೂಭರ್ತಿ ಘಟಕಗಳನ್ನು ರೂ.10094.00ಲಕ್ಷಗಳ ಮೊತ್ತದಲ್ಲಿ ಸ್ಥಾಪಿಸಲು ಉದ್ದೇಶಿಸಿರುವುದಾಗಿ ಮೇಲೆ ಓದಲಾದ (2) ಮತ್ತು (3)ರ ಪತ್ರಗಳಲ್ಲಿ ತಿಳಿಸಿರುತ್ತಾರೆ.

(ರೂ.ಲಕ್ಷಗಳಲ್ಲಿ)

ಕ್ರ ಸಂ	ಸರ್ವೆ ನಂ. ಮತ್ತು ಹೆಸರು	ನಿರ್ವಹಿಸುತ್ತಿರುವ ಬಿಬಿಎಂಪಿ ವಲಯದ ಹೆಸರು	ಕಾಮಗಾರಿಯ ಅಂದಾಜು ಮೊತ್ತ
1	28-ಮುದ್ದಯ್ಯನಪಾಳ್ಯ	ದಕ್ಷಿಣ	1730.00
2	59-ಮಾರ್ಗೋಂಡನಹಳ್ಳಿ	ರಾ.ರಾ ನಗರ	1712.00
3	27,107-ಮೈಲಸಂದ್ರ	ಬೊಮ್ಮನಹಳ್ಳಿ	1730.00
4	100-ಬೆಟ್ಟಹಲಸೂರು	ದಾಸರಹಳ್ಳಿ	1730.00
5	271,176-ಬಾಗಲೂರು	ಪೂರ್ವ	1650.00
6	02-ಮಿಟಗಾನಹಳ್ಳಿ	ಪಶ್ಚಿಮ	1542.00
	ಒಟ್ಟು		10094.00

ಮೇಲ್ಕಂಡ 6 ಸ್ಥಳಗಳಲ್ಲಿ ಘನತ್ಯಾಜ್ಯ ಭೂಭರ್ತಿ ವಿಲೇವಾರಿ ಘಟಕಗಳ ಸ್ಥಾಪನೆಗೆ ಕುರಿತಂತೆ ಈ ಕೆಳಕಂಡ ಅಂಶಗಳಿಗೆ ಅನುಮೋದನೆ ನೀಡುವಂತೆ ಮೇಲೆ ಓದಲಾದ (2)ರ ಪತ್ರದಲ್ಲಿ ಆಯುಕ್ತರು, ಬಿಬಿಎಂಪಿ ರವರು ಕೋರಿರುತ್ತಾರೆ.

1. ಕ್ವಾರಿಗಳಲ್ಲಿ ವೈಜ್ಞಾನಿಕ ತ್ಯಾಜ್ಯ ವಿಲೇವಾರಿ ಘಟಕ ಸ್ಥಾಪಿಸಲು ಕೆ.ಯು.ಐ.ಡಿ.ಎಫ್.ಸಿ ಸಂಸ್ಥೆಯವರನ್ನು ನೋಡಲ್ ಸಂಸ್ಥೆಯನ್ನಾಗಿ ನೇಮಿಸಲು ಅನುಮೋದನೆ.
2. ವೈಜ್ಞಾನಿಕ ತ್ಯಾಜ್ಯ ವಿಲೇವಾರಿ ಘಟಕ ನಿರ್ಮಾಣ ಕಾರ್ಯವನ್ನು ಮೆ॥ ಕೆ.ಆರ್.ಐ.ಡಿ.ಎಲ್ ಸಂಸ್ಥೆಯ ವತಿಯಿಂದ ಕೈಗೊಳ್ಳಲು ಅನುಮೋದನೆ.
3. ಸದರಿ ಘಟಕ ನಿರ್ಮಾಣಕ್ಕಾಗಿ ಅವಶ್ಯವಿರುವ ಮೊತ್ತ ರೂ.10094.00ಲಕ್ಷಗಳ ಅನುದಾನವನ್ನು ಕೆ.ಯು.ಐ.ಡಿ.ಎಫ್.ಸಿ ಸಂಸ್ಥೆಗೆ ಜಮಾಗಡೆ ಮಾಡುವುದು.

O/o Superintending Engineer (Projects)
No.
Date 376/16-17 20/5/16
B.B.M.P, BANGALORE

---2.

Scanned by CamScanner

ಆಯುಕ್ತರು, ಬಿಬಿಎಂಪಿ ರವರ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರಕ್ಕೆ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ:ನಅಇ 145 ಎಸ್‌ಎಫ್‌ಸಿ 2016,

ಬೆಂಗಳೂರು, ದಿನಾಂಕ:01-04-2016.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಬೃಹತ್ ಬೆಂಗಳೂರು ಮಹಾನಗರಪಾಲಿಕೆ (ಬಿಬಿಎಂಪಿ) ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುವ ಘನತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಲು ಈ ಕೆಳಕಂಡ ಸ್ಥಳಗಳಲ್ಲಿ ಘನತ್ಯಾಜ್ಯ ವಿಲೇವಾರಿ ಘಟಕಗಳನ್ನು ರೂ.10094.00ಲಕ್ಷಗಳ ವೆಚ್ಚದಲ್ಲಿ ಸ್ಥಾಪಿಸಲು ಅನುಮೋದನೆ ನೀಡಿದೆ.

(ರೂ.ಲಕ್ಷಗಳಲ್ಲಿ)

ಕ್ರ	ಸರ್ವೆ ನಂ. ಮತ್ತು ಹೆಸರು	ನಿರ್ವಹಿಸುತ್ತಿರುವ ಬಿಬಿಎಂಪಿ ವಲಯದ ಹೆಸರು	ಕಾಮಗಾರಿಯ ಅಂದಾಜು ಮೊತ್ತ
1	28-ಮುದ್ದಯ್ಯನಪಾಳ್ಯ	ದಕ್ಷಿಣ	1730.00
2	59-ಮಾರ್ಗೋಂಡನಹಳ್ಳಿ	ರಾ.ರಾ ನಗರ	1712.00
3	27,107-ಮೈಲಸಂದ್ರ	ಬೊಮ್ಮನಹಳ್ಳಿ	1730.00
4	100-ಬೆಟ್ಟಹಲಸೂರು	ದಾಸರಹಳ್ಳಿ	1730.00
5	271,176-ಬಾಗಲೂರು	ಪೂರ್ವ	1650.00
6	02-ಮಿಟಗಾನಹಳ್ಳಿ	ಪಶ್ಚಿಮ	1542.00
ಒಟ್ಟು			10094.00

ಮೇಲ್ಕಂಡ ಸ್ಥಳಗಳಲ್ಲಿ ವೈಜ್ಞಾನಿಕ ತ್ಯಾಜ್ಯ ವಿಲೇವಾರಿ ಘಟಕ ಸ್ಥಾಪಿಸಲು ಕರ್ನಾಟಕ ನಗರ ಮೂಲಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ಸಂಸ್ಥೆಯನ್ನು ನೋಡಲ್ ಸಂಸ್ಥೆಯನ್ನಾಗಿ ನೇಮಿಸಲಾಗಿದೆ.

ಮೇಲೆ ಓದಲಾದ (1)ರ ಆದೇಶದಲ್ಲಿ ಕರ್ನಾಟಕ ನಗರ ಮೂಲಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ಸಂಸ್ಥೆಗೆ ಬಿಡುಗಡೆ ಮಾಡಿರುವ ರೂ.70.00ಕೋಟಿ ಅನುದಾನವನ್ನು ಮೇಲ್ಕಂಡ ಸ್ಥಳಗಳಲ್ಲಿ ವೈಜ್ಞಾನಿಕ ತ್ಯಾಜ್ಯ ವಿಲೇವಾರಿ ಘಟಕ ಸ್ಥಾಪಿಸುವ ಕಾಮಗಾರಿಗಳಿಗೆ ಬಳಸಲು ಸರ್ಕಾರವು ಅನುಮೋದನೆ ನೀಡಿದೆ.

ಮೇಲ್ಕಂಡ ಕಾಮಗಾರಿಗೆ ವಿಸ್ತೃತ ಯೋಜನಾ ವರದಿಯನ್ನು (ಡಿಪಿಆರ್) ಸಿದ್ಧಪಡಿಸಿ ಸಕ್ಷಮ ಪ್ರಾಧಿಕಾರದಿಂದ ತಾಂತ್ರಿಕ ಅನುಮೋದನೆ ಪಡೆದು ನಿಯಮಾನುಸಾರ ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶದಲ್ಲಿ ಅನುಮೋದನೆ ನೀಡಿರುವ ಸ್ಥಳಗಳಲ್ಲಿ ವೈಜ್ಞಾನಿಕ ತ್ಯಾಜ್ಯ ವಿಲೇವಾರಿ ಘಟಕ ನಿರ್ಮಿಸುವ ಕಾಮಗಾರಿಗಳನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 145 ಎಸ್‌ಎಫ್‌ಸಿ 2016, ದಿನಾಂಕ:01-04-2016ರವ್ವಯ ಮೂರು ತಿಂಗಳ ಅವಧಿಯಲ್ಲಿ ರಾತ್ರಿ ಮತ್ತು ಹಗಲು ಪಾಳಿಗಳಲ್ಲಿ ಅನುಷ್ಠಾನಗೊಳಿಸಿ, ಪೂರ್ಣಗೊಳಿಸತಕ್ಕದ್ದು. ಸದರಿ ಅವಧಿಯಲ್ಲಿ ಕಾಮಗಾರಿಗಳನ್ನು ಪೂರ್ಣಗೊಳಿಸದಿದ್ದಲ್ಲಿ ಸಂಬಂಧಪಟ್ಟ ಅಧಿಕಾರಿ/ಸಿಬ್ಬಂದಿಗಳ ಮೇಲೆ ನಿಯಮಾನುಸಾರ ಶಿಸ್ತು ಕ್ರಮ ಕೈಗೊಳ್ಳಲಾಗುವುದು.

ಈಗಾಗಲೇ ಕಾಮಗಾರಿಗೆ ಬಿಡುಗಡೆ ಮಾಡಿರುವ ಅನುದಾನಕ್ಕೆ ಬಳಕೆ ಪ್ರಮಾಣ ಪತ್ರ ಹಾಗೂ ಕಾಮಗಾರಿ ಪ್ರಗತಿ ವರದಿ ಸಲ್ಲಿಸಿ, ಬಾಕಿ ಅನುದಾನಕ್ಕೆ ಪ್ರಸ್ತಾವನೆ ಸಲ್ಲಿಸತಕ್ಕದ್ದು.

ಉತ್ತಮ ಗುಣಮಟ್ಟದ ಕಾಮಗಾರಿಗಳನ್ನು ಸಮಂಜಸ ದರಗಳಲ್ಲಿ ಸಂಗ್ರಹಿಸಿರುವುದನ್ನು ಕರ್ನಾಟಕ ನಗರ ಮೂಲಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ಸಂಸ್ಥೆಯು ಧೃಢಪಡಿಸಿಕೊಳ್ಳತಕ್ಕದ್ದು.

---3.

Scanned by CamScanner

ಆಯುಕ್ತರು, ಬಿಬಿಎಂಪಿ ರವರು ಕಾಲಕಾಲಕ್ಕೆ ಮೇಲ್ಕಂಡ ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಸಿ, ಕೆಯುಐಡಿಎಫ್‌ಸಿ ಮೂಲಕ ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ.ಎಸ್ ಭಾಗ್ಯಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ

ಇವರಿಗೆ:

1) ಮಹಾಲೇಖಪಾಲರು/ (ಲೆ&ಹ) ಪಿ.ಸಿ ಶಾಖೆ ಬೆಂಗಳೂರು, ಕರ್ನಾಟಕ.
2) ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರಪಾಲಿಕೆ, ಬೆಂಗಳೂರು.
3) ವ್ಯವಸ್ಥಾಪಕ ನಿರ್ದೇಶಕರು, ಕೆಯುಐಡಿಎಫ್‌ಸಿ, ಬೆಂಗಳೂರು.
4) ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಬೆಂಗಳೂರು.
5) ವಿಶೇಷ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರಪಾಲಿಕೆ, ಬೆಂಗಳೂರು.
6) ಮಾನ್ಯ ಬೆಂಗಳೂರು ನಗರ ಅಭಿವೃದ್ಧಿ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
7) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-9), ವಿಧಾನ ಸೌಧ, ಬೆಂಗಳೂರು.
8) ಸರ್ಕಾರದ ಅಪರ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
9) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned by CamScanner